

ಎನ್‌ಐಟಿಕೆ ವಿದ್ಯಾರ್ಥಿಗಳು ಸೇನೆಯಲ್ಲಿ ಬಳಸುವ ಶಸ್ತ್ರಾಸ್ತ್ರಗಳ ಬಗ್ಗೆ ಮಾಹಿತಿ ಪಡೆದರು

# ಎನ್‌ಐಟಿಕೆಯಲ್ಲಿ ಸಾಂಸ್ಕೃತಿಕ ಉತ್ಸವ

ಪ್ರಜಾವಾಣಿ ವಾರ್ತೆ

ಮಂಗಳೂರು: ಸುರತ್ಕಲ್ ಎನ್‌ಐಟಿಕೆಯಲ್ಲಿ ಗುರುವಾರದಿಂದ ಆರಂಭವಾಗಿರುವ ಸಾಂಸ್ಕೃತಿಕ ಉತ್ಸವ ಮಾ.19ರವರೆಗೆ ನಡೆಯಲಿದೆ.

ಗುರುವಾರ ನಡೆದ ಕಾರ್ಯಕ್ರಮದಲ್ಲಿ ಚಲನಚಿತ್ರ ನಿರ್ದೇಶಕ ಪ್ರಕಾಶ್ ಬೆಳವಾಡಿ, ಪದ್ಮಶ್ರೀ ಪುರಸ್ಕೃತೆ ಅಂಕೋಲಾದ ತುಳಸಿ ಗೌಡ, ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧ್ಯಕ್ಷ ಶಾಂತ ತಿಮ್ಮಯ್ಯ, ಕಾಲೇಜಿನ ಪ್ರಭಾರಿ ನಿರ್ದೇಶಕ ಪ್ರೊ. ಜಿ.ಸಿ. ಮೋಹನಕುಮಾರ್, ವಿದ್ಯಾರ್ಥಿ ಕಲ್ಯಾಣ ವಿಭಾಗದ ಡೀನ್ ಪ್ರೊ. ನರೇಂದ್ರನಾಥ್ ಎಸ್, ರಜಿಸ್ಟ್ರಾರ್ ಕೆ. ರವೀಂದ್ರನಾಥ್ ಭಾಗವಹಿಸಿದ್ದರು.

ಇಂಡೊ ಟಿಬೆಟನ್ನ ಬಾರ್ಡರ್ ಪೊಲೀಸ್ ಘಟಕದ ಸಹಯೋಗದಲ್ಲಿ ಶುಕ್ರವಾರ ಕಾಲೇಜಿನಲ್ಲಿ ಶಸ್ತ್ರಾಸ್ತ್ರಗಳ ಪ್ರದರ್ಶನ ನಡೆಯಿತು. ಸೇನೆಯಲ್ಲಿ ಬಳಸುವ ಶಸ್ತ್ರಾಸ್ತ್ರಗಳ ಬಗ್ಗೆ ವಿದ್ಯಾರ್ಥಿಗಳಿಗೆ ಮಾಹಿತಿ ನೀಡಲಾಯಿತು.

Prajavani, Date: 18/03/23, p, no - 04